**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/71/ಸುಗ್ರಾಯೋ/2022
(ಇ-818608)

ಕರ್ನಾಟಕ ಸರ್ಕಾರದ ,ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು ,ದಿನಾಂಕ : 06/07/2022

**ತಿದ್ದುಪಡಿ ಆದೇಶ**

ವಿಷಯ : ಲೆ.ಶೀ 4702ರಡಿ ಮಂಡ್ಯ ಜಿಲ್ಲೆಯ ಕೆರೆಯ ಸಮಗ್ರ ಅಭಿವೃದ್ಧಿಪಡಿಸಲು ಹೊರಡಿಸಲಾದ ಆದೇಶವನ್ನು ತಿದ್ದುಪಡಿ ಮಾಡುವ ಬಗ್ಗೆ.

ಉಲ್ಲೇಖ :1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ/57/ಸುಗ್ರಾಯೋ/2022, ಬೆಂಗಳೂರು, ದಿನಾಂಕ:22.06.2022.
2. ಮಾನ್ಯ ಶಾಸಕರು, ನಾಗಮಂಗಲ ಕ್ಷೇತ್ರ, ಮಂಡ್ಯ ಜಿಲ್ಲೆ ರವರ ಪತ್ರ ದಿನಾಂಕ: 29.06.2022

***************

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, 2022-23ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ, ರಾಜ್ಯದ 33000 ಗ್ರಾಮ ಪಂಚಾಯಿತಿ ಕೆರೆಗಳ ಪೈಕಿ 1000 ಕೆರೆಗಳನ್ನು ಆಯ್ಕೆ ಮಾಡಿ ಸಮಗ್ರವಾಗಿ ಅಭಿವೃದ್ದಿಪಡಿಸಲು ಸರ್ಕಾರವು ತೀರ್ಮಾನಿಸಿದಂತೆ, ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕು, ಬಿಂಡಿಗನವಿಲೆ ಹೋಬಳಿ, ಹೆಚ್.ಕ್ಯಾತನಹಳ್ಳಿ ಗ್ರಾಮದ ಕೆರೆಯನ್ನು ಆಯ್ಕೆ ಮಾಡಿ ಅನುಷ್ಠಾನ ಮಾಡಲು ಉಲ್ಲೇಖ(1) ರನ್ವಯ ಅನುಮೋದನೆ ನೀಡಿದೆ.

ಉಲ್ಲೇಖ(2) ರನ್ವಯ, ಮಾನ್ಯ ಶಾಸಕರು, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆರವರು ಪ್ರಕೃತಿ ವಿಕೋಪದಿಂದ ತಮ್ಮ ಕ್ಷೇತ್ರದಲ್ಲಿ ಭಾರಿ ಮಳೆಯಾಗಿದ್ದು ಸದರಿ ಕೆರೆಯು ಒಡೆದು ಹೋಗಿರುತ್ತದೆ ಮತ್ತು ಒಂದು ವರ್ಷಗಳಾಗಿದ್ದರು ಸಹಾ ಇಲ್ಲಿಯವರೆಗೆ ಯಾವುದೇ ಅಭಿವೃದ್ಧಿಪಡಿಸಿರುವುದಿಲ್ಲ, ಇದರಿಂದ ಕೆರೆಯ ಕೆಳಭಾಗದ ರೈತರುಗಳು ಕೃಷಿ ಚಟುವಟಿಕೆಗಳನ್ನು ನಿರ್ವಹಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ ಸದರಿ ಕೆರೆಯನ್ನು ಅಭಿವೃದ್ದಿಪಡಿಸಲು ಅಂದಾಜು ವೆಚ್ಚ 55.00 ಲಕ್ಷ ರೂಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಿರುತ್ತಾರೆ.

ಅದರಂತೆ, ಸದರಿ ಕೆರೆಗಾಗಿ ಈ ಹಿಂದೆ ಅನುಮೋದಿಸಲಾದ ಮೊತ್ತವನ್ನು ಪರಿಷ್ಕರಿಸಿ ಈ ಕೆಳಕಂಡಂತೆ ತಿದ್ದುಪಡಿ ಮಾಡಲಾಗಿದೆ ಹಾಗೂ ಉಳಿದಂತೆ ಈ ಹಿಂದೆ ಹೊರಡಿಸಿದ್ದ ಆದೇಶದಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ.

| ಕ್ರ ಸಂ. | ಜಿಲ್ಲೆ | ತಾಲ್ಲೂಕು | ಗ್ರಾಮ ಪಂಚಾಯಿತಿ | ಆಯ್ಕೆ ಮಾಡಿದ ಕೆರೆ | ಈ ಹಿಂದೆ ಅನುಮೋದಿಸಲಾದ ಅಂದಾಜು ಮೊತ್ತ (ಲಕ್ಷಗಳಲ್ಲಿ) | ಪರಿಷ್ಕೃತ ಅಂದಾಜು ಮೊತ್ತ (ಲಕ್ಷಗಳಲ್ಲಿ) |
|---|---|---|---|---|---|---|
| 1. | ಮಂಡ್ಯ | ನಾಗಮಂಗಲ | ಹೊನ್ನಾವರ | ಹೆಚ್.ಕ್ಯಾತನಹಳ್ಳಿ ಗ್ರಾಮದ ಕೆರೆ ಅಭಿವೃದ್ಧಿ | 30.00 | 55.00 |

**ಷರತ್ತುಗಳು:-**

1. ಕಾರ್ಯಕ್ರಮ ಅನುಷ್ಠಾನ ಮಾಡುವಾಗ ಸಂಬಂಧಪಟ್ಟ ಯೋಜನೆಗಳ ಮಾರ್ಗಸೂಚಿಗಳಲ್ಲಿ ತಿಳಿಸಿದಂತೆ ಅನುಷ್ಠಾನ ಮಾಡುವುದು.
2. ಕಡ್ಡಾಯವಾಗಿ ಅನುಷ್ಠಾನ ಮಾಡಬೇಕಾದ ಕಾರ್ಯಕ್ರಮಗಳಿಗೆ ಕ್ರಿಯಾಯೋಜನೆ ರೂಪಿಸಿ ಆಯಾ ಜಿಲ್ಲಾ ಪಂಚಾಯಿತಿಗಳಿಂದ ಆಡಳಿತಾತ್ಮಕ ಅನುಮೋದನೆ ಪಡೆದುಕೊಂಡು ಕಾಮಗಾರಿಗಳನ್ನು ಪ್ರಾರಂಭಿಸತಕ್ಕದ್ದು.
3. ನರೇಗಾ (MGNREGA) ಯೋಜನೆಯಡಿ ಕೈಗೊಳ್ಳಬಹುದಾದ ಕಾರ್ಯಕ್ರಮಗಳಿಗೆ ಹೆಚ್ಚುವರಿಯಾಗಿ ಕ್ರಿಯಾಯೋಜನೆ ರೂಪಿಸಿಕೊಂಡು ಪ್ರಸಕ್ತ ಆರ್ಥಿಕ ಸಾಲಿನ ಮಾರ್ಚ್-2023ರ ಅಂತ್ಯದೊಳಗೆ ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸುವುದು.

06/07/2022

4. ಯೋಜನೆಗೆ ಇತರೆ ಮೂಲಗಳಿಂದ ದೊರೆಯಬಹುದಾದ ಆರ್ಥಿಕ ದೇಣಿಗೆ, ಭೌತಿಕ ಸಂಪನ್ಮೂಲಗಳು, ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ, ಸಿ.ಎಸ್.ಆರ್ ಅನುದಾನದೊಂದಿಗೆ ಒಗ್ಗೂಡಿಸುವ ಮೂಲಕ ಅನುಷ್ಠಾನಗೊಳಿಸುವುದು.
5. ಸರ್ಕಾರದ ಪತ್ರ ಸಂಖ್ಯೆ:RDC-EGS/347/2022(Part-1), ದಿ:07.06.2022 ರ ಮೂಲಕ ಹೊರಡಿಸಿರುವ ಮಾರ್ಗಸೂಚಿಗಳನ್ನು ಪಾಲಿಸಿ ಸಮರ್ಪಕವಾಗಿ ಅನುಷ್ಠಾನ ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**Signed by Ravikumar**
**Date: 06-07-2022 11:43:10**

N. [signature] 06/07/2022

**(ಎನ್.ರವಿಕುಮಾರ್)**
ಉಪ ನಿರ್ದೇಶಕರು (ಗ್ರಾಮೀಣಾಭಿವೃದ್ಧಿ) ಹಾಗೂ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ರವರಿಗೆ:**

1. ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಅಡಿಟ್-1) ಮತ್ತು (ಅಡಿಟ್-2), ಕರ್ನಾಟಕ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯ ಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ,
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬೆಂಗಳೂರು.
12. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, ಅರಣ್ಯ ಭವನ, ಬೆಂಗಳೂರು.
13. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾ. ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
14. ಆಯುಕ್ತರು, ಪಂ.ರಾಜ್ ಆಯುಕ್ತಾಲಯ, ಕೆ.ಜಿ. ರಸ್ತೆ, ಬೆಂಗಳೂರು
15. ಆಯುಕ್ತರು, ಗ್ರಾ.ಕು.ನೀ. & ನೈ. ಇಲಾಖೆ, ಕಾವೇರಿಭವನ, ಕೆ.ಜಿ. ರಸ್ತೆ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
17. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಕೆರೆ ಸಂರಕ್ಷಣೆ & ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು.
18. ವಿಶೇಷಾಧಿಕಾರಿಗಳು (ಜಿ.ಪಂ.) ಮತ್ತು ಪದನಿಮಿತ್ತ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು.
19. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ. ರಾಜ್ ಇಲಾಖೆ, ಬೆಂಗಳೂರು.
20. ಎಲ್ಲಾ ನಿರ್ದೇಶಕರು, ಗ್ರಾ.ಅ ಮತ್ತು ಪಂ.ರಾಜ್ಇಲಾಖೆ, ಬೆಂಗಳೂರು.
21. ನಿರ್ದೇಶಕರು, ಕರ್ನಾಟಕ ದೂರ ಸಂವೇದಿ ಅನ್ವಯಿಕ ಕೇಂದ್ರ(KSRSAC), ಬೆಂಗಳೂರು.
22. ನಿರ್ದೇಶಕರು, ಮೀನುಗಾರಿಕೆ ನಿರ್ದೇಶನಾಲಯ, ಬೆಂಗಳೂರು.
23. ಅಧೀನ ಕಾರ್ಯದರ್ಶಿಗಳು (ವೆಚ್ಚ-6), ಜಿಲ್ಲಾ ಪಂಚಾಯತ್, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
24. ಮುಖ್ಯಸ್ಥರು, ಗಣಕಕೋಶ, ಗ್ರಾ. ಪಂ.ರಾಜ್ ಇಲಾಖೆ, ವೆಬ್ ಸೈಟ್ ನಲ್ಲಿ ಅಳವಡಿಸಲು
25. ಸಂಪಾದಕರು,ಕರ್ನಾಟಕ ವಿಕಾಸ, ಪತ್ರಿಕೆಯಲ್ಲಿ ಪ್ರಕಟಿಸಲು.
26. ರಕ್ಷಾ ಕಡತ/ ಹೆಚ್ಚುವರಿ ಪ್ರತಿ .